**All India Radio: Bangalore**
**National Bulletin In Kannada**
**14.10.2025 19.35 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಕಾರ್ಮಿಕ ಕಾನೂನುಗಳನ್ನು ಸರಳೀಕರಿಸುವಲ್ಲಿ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಮಹತ್ತರ ಹೆಜ್ಜೆ - ಉಪರಾಷ್ಟ್ರಪತಿ
2. ಶೈಕ್ಷಣಿಕ ಪದವಿಯ ಜೊತೆಗೆ ಕೌಶಲ್ಯ ಕಲಿಸುವುದು ವಿಶ್ವ ವಿದ್ಯಾನಿಲಯಗಳ ಜವಾಬ್ದಾರಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್
3. ಭಯೋತ್ಪಾದನೆ ವಿರುದ್ಧ ಭಾರತ ಶೂನ್ಯ ಸಹಿಷ್ಣುತಾ ನೀತಿ - ಕೇಂದ್ರ ಗೃಹ ಸಚಿವ ಅಮಿತ್ ಶಾ
4. ಕೇಂದ್ರ ಸರ್ಕಾರ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆ - ಕೇಂದ್ರ ಸಚಿವ ವಿ. ಸೋಮಣ್ಣ

<><><><>

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯ ಅವರು ಇಂದು ಸಂಸತ್ ಭವನದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿದರು. ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಹಾಗೂ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ಕೈಗೊಂಡ ಪ್ರಮುಖ ಉಪಕ್ರಮಗಳು ಮತ್ತು ನೀತಿ ಸುಧಾರಣೆಗಳ ಕುರಿತು ಸಭೆಯಲ್ಲಿ, ಉಪರಾಷ್ಟ್ರಪತಿಯವರಿಗೆ ವಿವರಿಸಲಾಯಿತು. ಕಾರ್ಮಿಕ ಕಾನೂನುಗಳನ್ನು ಸರಳೀಕರಿಸುವಲ್ಲಿ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಪ್ರಯತ್ನಗಳು ಮತ್ತು ವಿವಿಧ ವಲಯಗಳಲ್ಲಿ ಸಾಮಾಜಿಕ ಭದ್ರತೆಯನ್ನು ಹೆಚ್ಚಿಸಲು ಮತ್ತು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಅದರ ನಡೆಯುತ್ತಿರುವ ಕಾರ್ಯಗಳ ಬಗ್ಗೆ ಸಿ.ಪಿ. ರಾಧಾಕೃಷ್ಣನ್ ಹರ್ಷ ವ್ಯಕ್ತಪಡಿಸಿದರು. ಕಾರ್ಮಿಕರ ಕಲ್ಯಾಣವನ್ನು ಸುಧಾರಿಸಲು ಮತ್ತು ಭಾರತದ ಸಮಗ್ರ ಆರ್ಥಿಕ ಬೆಳವಣಿಗೆಯತ್ತ ಪ್ರಯಾಣವನ್ನು ಮುನ್ನಡೆಸಲು ಸಚಿವಾಲಯದ ಬದ್ಧತೆಯನ್ನು ಅವರು ಶ್ಲಾಘಿಸಿದರು. ಈ ಸಂದರ್ಭದಲ್ಲಿ, ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ

ಶೋಭಾ ಕರಂದ್ಲಾಜೆ ಮತ್ತು ಯುವಜನ ವ್ಯವಹಾರ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಉಪಸ್ಥಿತರಿದ್ದರು.

<><><><>

ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪದವಿಯ ಜೊತೆಗೆ ಕೌಶಲ್ಯ ಕಲಿಸುವುದು ವಿಶ್ವ ವಿದ್ಯಾನಿಲಯಗಳ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಯ ಕೌಶಲ್ಯವನ್ನು ಆಧರಿಸಿ ಅದನ್ನು ವರ್ಧಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯಗಳು ಕೆಲಸ ಮಾಡಬೇಕು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಅವರು ಧಾರವಾಡದಲ್ಲಿ ಧರ್ತಿ ಬಯೋನೆಸ್ಟ್ ಇನ್ ಕ್ಯೂಬೇಷನ್ ಕೇಂದ್ರವನ್ನು ಉದ್ಘಾಟಿಸಿದ ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದರು. ಭಾರತ ದಶಕಗಳಿಂದಲೂ ವಿದ್ಯಾಭ್ಯಾಸದ ಮೇಲೆ ಅದರಲ್ಲೂ ಮುಖ್ಯವಾಗಿ ಪ್ರಮುಖ ವಿದ್ಯಾಸಂಸ್ಥೆಗಳಲ್ಲಿ ಹಣ ವಿನಿಯೋಗಿಸುತ್ತಿದೆ. ಅದರ ಪರಿಣಾಮ ಭಾರತದಿಂದ ದೊಡ್ಡ ಪ್ರಮಾಣದಲ್ಲಿ ತಂತ್ರಜ್ಞರು ಹಾಗೂ ವಿಜ್ಞಾನಿಗಳು ಹೊರಹೊಮ್ಮಿದ್ದಾರೆ. ಆದರೆ ಅವರಿಗೆ ಸಂಶೋಧನೆಗೆ ಹಾಗೂ ಕೌಶಲ್ಯಾಭಿವೃದ್ಧಿಗೆ ಸರಿಯಾದ ವಾತಾವರಣ ಸಿಗದೇ ಇದ್ದುದ್ದರಿಂದ ಅವರು ವಿದೇಶಗಳತ್ತ ಮುಖ ಮಾಡಿದರು. ಇತ್ತೀಚೆಗೆ ಸರ್ಕಾರ ಸಾಕಷ್ಟು ಉತ್ತೇಜನ ನೀಡುತ್ತಿರುವುದರಿಂದ ಸ್ಟಾರ್ಟ್‌ಅಪ್‌ಗಳು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತದಲ್ಲಿ ಸಾಕಷ್ಟು ಅವಕಾಶಗಳು ನಿರ್ಮಾಣವಾಗಿದೆ ಎಂದು ಅವರು ತಿಳಿಸಿದರು. ನಿರ್ಮಲಾ ಸೀತಾರಾಮನ್ ಅವರ ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿಯಲ್ಲಿ ೫ ಕೋಟಿ ೧೯ ಲಕ್ಷ ರೂಪಾಯಿ ಸಹಾಯಧನ ಮತ್ತು ಭಾರತ ಸರ್ಕಾರದ ಜೈವಿಕ ತಂತ್ರಜ್ಞಾನ ಇಲಾಖೆಯಡಿಯಲ್ಲಿ ಬಯೋಟೆಕ್ನಾಲಜಿ ಇಂಡಸ್ಟ್ರಿ ರಿಸರ್ಚ್ ಅಸಿಸ್ಟೆನ್ಸ್ ಕೌನ್ಸಿಲ್‌ನಿಂದ ೫ ಕೋಟಿ ರೂಪಾಯಿ ಸಹಾಯಧನದೊಂದಿಗೆ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ.

**ಧ್ವನಿ : ನಿರ್ಮಲಾ ಸೀತಾರಾಮನ್ (೩೦ ಸೆಕೆಂಡ್‌ಗಳು)**

<><><><>

ರೈಲ್ವೆ ರಕ್ಷಣಾ ದಳ ಕೇವಲ ಪ್ರಯಾಣಿಕರ ಸುರಕ್ಷತೆಗಾಗಿ ಮಾತ್ರವಲ್ಲ, ಅಪರಾಧಗಳನ್ನು ತಡೆಗಟ್ಟಲು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗದ ರೈಲ್ವೆ ರಕ್ಷಣಾ ದಳ ಮತ್ತು ರಾಷ್ಟ್ರೀಯ ಮಹಿಳಾ ಆಯೋಗದ ವತಿಯಿಂದ ಬೆಂಗಳೂರಿನಲ್ಲಿಂದು ನಡೆದ ಮಾನವ

ಕಳ್ಳಸಾಗಣೆ ವಿರೋಧಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಹೇಳಿದ್ದಾರೆ. ರೈಲ್ವೆ ನೇಮಕ ಪರೀಕ್ಷೆಗಳನ್ನು ಕನ್ನಡದಲ್ಲೂ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷೆ ವಿಜಯ ಕೆ. ರೆಹತ್ಕರ್ ಮಾತನಾಡಿ, ಮಾನವ ಕಳ್ಳಸಾಗಣೆ ಕೇವಲ ಅಪರಾಧವಲ್ಲ. ಅದು ಮಾನವೀಯತೆಯ ಮೇಲಿನ ದಾಳಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ರೈಲುಗಳಲ್ಲಿ ಏಕಾಂಗಿಯಾಗಿ ಪ್ರಯಾಣಿಸುವ ಮಹಿಳೆಯರ ಹೆಚ್ಚಿನ ಸುರಕ್ಷತೆಗಾಗಿ ರೈಲ್ವೆ ರಕ್ಷಣಾ ದಳವು ಸಿಬ್ಬಂದಿ ನಿಯೋಜಿಸುತ್ತಿದೆ ಎಂದು ತಿಳಿಸಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಸರ್ಕಾರ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಭಯೋತ್ಪಾದಕ ಬೆದರಿಕೆಗಳಿಂದ ದೇಶವನ್ನು ರಕ್ಷಿಸಲು ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು. ಹರಿಯಾಣದ ಮಾನೇಸರ್‌ನಲ್ಲಿ ನಡೆದ ರಾಷ್ಟ್ರೀಯ ಭದ್ರತಾ ಪಡೆಯ ೪೧ನೇ ಸ್ಥಾಪನಾ ದಿನಾಚರಣೆಯನ್ನುದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಸಂಘಟಿತ ಅಪರಾಧ ಮತ್ತು ಭಯೋತ್ಪಾದನೆಯನ್ನು ಎದುರಿಸುವಲ್ಲಿ ಎನ್‌ಎಸ್‌ಜಿ ಮುಂಚೂಣಿಯಲ್ಲಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ, ಭಯೋತ್ಪಾದನೆಯನ್ನು ಎದುರಿಸಲು ಸುಧಾರಿತ ತರಬೇತಿಯನ್ನು ನೀಡುವ ವಿಶೇಷ ಕಾರ್ಯಾಚರಣೆ ತರಬೇತಿ ಕೇಂದ್ರಕ್ಕೆ ಅಡಿಪಾಯ ಹಾಕಿದ ಅಮಿತ್ ಶಾ, ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ರಾಷ್ಟ್ರೀಯ ಭದ್ರತಾ ಪಡೆಯು ಒಂದು ಕೇಂದ್ರವನ್ನು ಸ್ಥಾಪಿಸಲಿದೆ, ಮುಂಬೈ, ಚೆನ್ನೈ, ಕೋಲ್ಕತ್ತಾ, ಹೈದರಾಬಾದ್, ಅಹಮದಾಬಾದ್ ಮತ್ತು ಜಮ್ಮು ಟಾಸ್ಕ್ ಫೋರ್ಸ್‌ನಲ್ಲಿ ಈಗಾಗಲೇ ಆರು ಎನ್‌ಎಸ್‌ಜಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು.

**ಧ್ವನಿ : ಅಮಿತ್ ಶಾ**

<><><>

ಪಂಜಾಬ್ ಪ್ರವಾಹದಲ್ಲಿ ಹಾನಿಗೊಳಗಾದ ೩೬ ಸಾವಿರದ ೭೦೩ ಮನೆಗಳ ಪುನರ್ ನಿರ್ಮಾಣಕ್ಕಾಗಿ ಪಂಜಾಬ್‌ನ ಪ್ರಸ್ತಾವನೆಯನ್ನು ಕೇಂದ್ರವು ಒಪ್ಪಿಕೊಂಡಿದೆ ಮತ್ತು ಮನೆ ಕಳೆದುಕೊಂಡ ಪ್ರತಿ ಕುಟುಂಬಕ್ಕೂ ಈ ಉದ್ದೇಶಕ್ಕಾಗಿ ತಲಾ ಒಂದು ಲಕ್ಷದ ೬೦ ಸಾವಿರ ರೂಪಾಯಿ ನೀಡಲಾಗುವುದು ಎಂದು ಕೇಂದ್ರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್

ಸಿಂಗ್ ಚೌಹಾಣ್ ಹೇಳಿದ್ದಾರೆ. ಲುಧಿಯಾನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರವು ಈ ಹಿಂದೆ ೧೪ ಸಾವಿರ ಮನೆಗಳಿಗೆ ಪ್ರಸ್ತಾವನೆಯನ್ನು ನೀಡಿತ್ತು. ನಂತರ ಅದನ್ನು ಒಟ್ಟು ೩೬ ಸಾವಿರದ ೭೦೩ ಕ್ಕೆ ಹೆಚ್ಚಿಸಿದೆ. ಪಂಜಾಬ್ ಕೃಷಿ ಸಚಿವ ಗುರ್ಮೀತ್ ಸಿಂಗ್ ಖುಡಿಯಾನ್ ಅವರಿಗೆ ಒಪ್ಪಿಗೆ ಪತ್ರವನ್ನು ಹಸ್ತಾಂತರಿಸಲಾಗಿದೆ ಎಂದು ಅವರು ಹೇಳಿದರು. ರಾಜ್ಯದಲ್ಲಿ ತೊಂದರೆಗೊಳಗಾದ ರೈತರಿಗೆ ಉಚಿತ ಧಾನ್ಯ ಬೀಜಗಳನ್ನು ನೀಡಲು ೭೪ ಕೋಟಿ ರೂಪಾಯಿಗಳನ್ನು ಸಹ ಮಂಜೂರು ಮಾಡಲಾಗಿದೆ. ಎಂಜಿ-ನರೇಗಾ ಕಾರ್ಯಕ್ರಮದಡಿ ಕೆಲಸದ ದಿನಗಳನ್ನು ೧೦೦ ರಿಂದ ೧೫೦ ದಿನಗಳಿಗೆ ಹೆಚ್ಚಿಸಲಾಗುವುದು ಎಂದರು. ಪ್ರವಾಹ ಪೀಡಿತ ಪಂಜಾಬ್‌ಗೆ ಇತ್ತೀಚೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಧಾನಿ ಘೋಷಿಸಿದ ೧ ಸಾವಿರದ ೬೦೦ ಕೋಟಿ ರೂಪಾಯಿ ಪರಿಹಾರ ಪ್ಯಾಕೇಜ್‌ನಲ್ಲಿ, ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯ ೨೪೦ ಕೋಟಿ ರೂಪಾಯಿಗಳ ಮುಂಗಡ ಕಂತನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ ಎಂದು ಸಚಿವರು ಹೇಳಿದರು.

<><><>

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ಮೂರು ಹೊಸ ಮನೆ-ಮನೆ ಸರಕು ಮತ್ತು ಪಾರ್ಸೆಲ್ ಸೇವೆಗಳನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ದೆಹಲಿಯಿಂದ ಕೋಲ್ಕತ್ತಾಗೆ ಅಶ್ಯೂರ್ಡ್ ಟ್ರಾನ್ಸಿಟ್ ಕಂಟೇನರ್ ಸೇವೆ ಮತ್ತು ಮುಂಬೈನಿಂದ ಕೋಲ್ಕತ್ತಾಗೆ ರೈಲ್ವೆ ಪಾರ್ಸೆಲ್ ವ್ಯಾನ್ ಅನ್ನು ಬಳಸಿಕೊಂಡು ಡೋರ್ ಟು ಡೋರ್ ಪಾರ್ಸೆಲ್ ಸೇವೆಗಳನ್ನು ಉದ್ಘಾಟಿಸಲಾಯಿತು. ಮನೆ-ಮನೆ ಪಾರ್ಸೆಲ್ ಸೇವೆಯು ವೇಗವಾಗಿ ಮತ್ತು ಸಮಯಕ್ಕೆ ಸರಿಯಾಗಿ ತಲುಪಿಸಲು ಸರಕುಗಳ ಪರಿಣಾಮಕಾರಿ ನಿರ್ವಹಣೆಯನ್ನು ಖಚಿತಪಡಿಸುತ್ತದೆ. ಮಾಧ್ಯಮಗಳಿಗೆ ಮಾಹಿತಿ ಅವರು, ಮನೆ-ಮನೆ ಸೇವಾ ದಕ್ಷತೆಯು ದೇಶಕ್ಕೆ ಬಹಳ ಅವಶ್ಯಕವಾಗಿದೆ. ಸೇವೆಯು ನಿಜವಾದ ದಕ್ಷತೆಯನ್ನು ಬೆಳೆಸುತ್ತದೆ ಮತ್ತು ಲಾಜಿಸ್ಟಿಕ್ ವೆಚ್ಚವನ್ನು ಕಡಿಮೆ ಮಾಡುತ್ತದೆ ಎಂದು ಹೇಳಿದರು.

<><><>

ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಗೆ ಬಿಜೆಪಿ ೭೧ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ತಾರಾಪುರದಿಂದ ಮತ್ತು ಉಪಮುಖ್ಯಮಂತ್ರಿ ವಿಜಯ್ ಸಿನ್ಹಾ ಲಖಿಸರಾಯ್ ಸ್ಥಾನದಿಂದ ಸ್ಪರ್ಧಿಸಲಿದ್ದಾರೆ. ಬಿಹಾರ ಆರೋಗ್ಯ ಸಚಿವ ಮಂಗಲ್ ಪಾಂಡೆ ಅವರನ್ನು ಸಿವಾನ್ ವಿಧಾನಸಭಾ ಕ್ಷೇತ್ರದಿಂದ

ಕಣಕ್ಕಿಳಿಸಲಾಗಿದೆ. ರಾಜ್ಯ ಸಚಿವ ನಿತಿನ್ ನಬಿನ್ ಬಂಕಿಪುರದಿಂದ ಮತ್ತು ರೇಣುದೇವಿ ಬೆಟ್ಟಿಯಾದಿಂದ ಸ್ಪರ್ಧಿಸಲಿದ್ದಾರೆ. ಔರಂಗಾಬಾದ್ ಸ್ಥಾನದಿಂದ ತ್ರಿವಿಕ್ರಮ್ ಸಿಂಗ್ ತಮ್ಮ ಭವಿಷ್ಯವನ್ನು ಪರೀಕ್ಷಿಸಲಿದ್ದಾರೆ. ಶ್ರೇಯಸಿ ಸಿಂಗ್ ಜಮುಯಿ ವಿಧಾನಸಭಾ ಸ್ಥಾನದಿಂದ ಮತ್ತು ಮಾಜಿ ಕೇಂದ್ರ ಸಚಿವ ರಾಮಕೃಪಾಲ್ ಯಾದವ್ ಅವರಿಗೆ ದಾನಾಪುರ ಸ್ಥಾನದಿಂದ ಟಿಕೆಟ್ ನೀಡಲಾಗಿದೆ. ಅಭ್ಯರ್ಥಿಗಳ ಹೆಸರನ್ನು ಬಿಜೆಪಿ ಕೇಂದ್ರ ಚುನಾವಣಾ ಸಮಿತಿ ಅಂತಿಮಗೊಳಿಸಿದೆ.

<><><><>

ಆಂಧ್ರಪ್ರದೇಶದಲ್ಲಿ ಗೂಗಲ್ ಘೋಷಿಸಿರುವ ಹೊಸ ಗಿಗಾವ್ಯಾಟ್-ಪ್ರಮಾಣದ ಕೃತಕಬುದ್ಧಿಮತ್ತೆ ಹಬ್ ಭಾರತದ ಕೃತಕಬುದ್ಧಿಮತ್ತೆ ಮಿಷನ್‌ನ ಗುರಿಗಳನ್ನು ಪೂರೈಸುವಲ್ಲಿ ಬಹಳ ಸಹಾಯ ಮಾಡುತ್ತದೆ ಎಂದು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿಂದು ಒಂದು ಗಿಗಾವ್ಯಾಟ್-ಸಾಮರ್ಥ್ಯದ ಕೃತಕ ಬುದ್ಧಿಮತ್ತೆ ಹಬ್‌ಅನ್ನು ಸ್ಥಾಪಿಸಲು ಮುಂದಿನ ಐದು ವರ್ಷಗಳಲ್ಲಿ ೧೫ ಶತಕೋಟಿ ಅಮೆರಿಕನ್ ಡಾಲರ್ ಬೃಹತ್ ಹೂಡಿಕೆಯನ್ನು ಗೂಗಲ್ ಘೋಷಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>